ಗರಿಷ್ಠ 31°c | ಕನಿಷ್ಠ 19°c

ಸುದ್ದಿ ಸಿಂಚನ

ಐಟಿಐ ಪ್ರವೇಶಕ್ಕೆ ಅರ್ಜಿ

ಬಾಳೆಹೊನ್ನೂರು: ರೇಣುಕನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಐಟಿಐ ಕಾಲೇಜಿನಲ್ಲಿ 2026ನೇ ಸಾಲಿಗೆ ವಿವಿಧ ವೃತ್ತಿಪರ ಕೋರ್ಸುಗಳಿಗೆ ಅರ್ಜಿ ಆಹ್ವಾನಿಸಿದ್ದು, ಆಸಕ್ತರು ಅರ್ಜಿ ಸಲ್ಲಿಸಬಹುದು ಎಂದು ಪ್ರಾಚಾರ್ಯ ಎಚ್.ಆರ್.ಆನಂದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಂಸ್ಥೆಯಲ್ಲಿ ಫಿಟ್ಟರ್ (ಮೆಕ್ಯಾನಿಕಲ್), ಎಲೆಕ್ಟ್ರಿಕಲ್ ಹಾಗೂ ಫ್ಯಾಕ್ಟರಿ ವೆಲ್ಡರ್ ಕೋರ್ಸುಗಳು ಲಭ್ಯವಿದ್ದು, 14 ವರ್ಷ ಮೇಲ್ಪಟ್ಟ ಎಸ್ಸೆಸ್ಸೆಲ್ಸಿ, ಪಿಯುಸಿ ಉತ್ತೀರ್ಣ, ಅನುತ್ತೀರ್ಣರಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಸಂದರ್ಶನದ ಮೂಲಕ ಉದ್ಯೋಗ ಕೊಡಿಸಲಿದೆ. ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯವೂ ಲಭ್ಯವಿದೆ. ಈಗಾಗಲೇ ಪ್ರವೇಶಾತಿ ಪ್ರಾರಂಭವಾಗಿದೆ. ಸರ್ಕಾರ ನಿಗದಿಪಡಿಸಿದ ದಿನಾಂಕದಂದು ಪ್ರವೇಶಾತಿ ಸ್ಥಗಿತವಾಗಲಿದೆ. ಮಾಹಿತಿಗಾಗಿ 9448745022, 9902034458 ಸಂಪರ್ಕಿಸಬಹುದು.

ಅಕ್ರಮ ಮಟ್ಕಾ ಜೂಜಾಟ: ಆರೋಪಿ ಬಂಧನ

ಬಾಳೆಹೊನ್ನೂರು: ಬಾಳೆಹೊನ್ನೂರು ಠಾಣಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮಟ್ಕಾ ಜೂಜಾಟದಲ್ಲಿ ತೊಡಗಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿ ಪ್ರಕರಣ ದಾಖಲಿಸಿದ್ದಾರೆ. ಬಿ.ಕಣಬೂರು ಗ್ರಾಮದ ಮುರುಗೇಶ ಆರೋಪಿ ಈತ ಬಿ.ಕಣಬೂರು ಗ್ರಾಪಂ ಕಟ್ಟಡದ ಬಳಿಯಲ್ಲಿ ಮಟ್ಕಾ ಜೂಜಾಟದಲ್ಲಿ ತೊಡಗಿದ್ದ ಖಚಿತ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಪೊಲೀಸರು ದಾಳಿ ನಡೆಸಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಆರೋಪಿಯಿಂದ ಮಟ್ಕಾ ಸಂಖ್ಯೆ ಬರೆದಿರುವ ಚೀಟಿ, ಜೂಜಾಟಕ್ಕೆ ಬಳಸಿದ್ದ ನಗದನ್ನು ಪೊಲೀಸರು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

ಮರು ಮೌಲ್ಯಮಾಪನ: ವಾಣಿಜ್ಯ ವಿಭಾಗದಲ್ಲಿ ಕೃಪಾನಿಗೆ ಪ್ರಥಮ ಸ್ಥಾನ

ನರಸಿಂಹರಾಜಪುರ: ಪಟ್ಟಣದ ಎಂಕೆಸಿಪಿಎಂ ಕಾಲೇಜಿನ ದ್ವಿತೀಯ ಪಿ.ಯು.ಸಿ.ಯ ಕೃಪಾನಿ ವಾಣಿಜ್ಯ ವಿಭಾಗದಲ್ಲಿ ಮರು ಮಾಲ್ಯ ಮಾಪನದಲ್ಲಿ ಹೆಚ್ಚುವರಿ 9 ಅಂಕಗಳು ಲಭಿಸಿದ್ದು ತಾಲೂಕಿಗೆ ಪ್ರಥಮ ಸ್ಥಾನಗಳಿದ್ದಾಳೆ ಎಂದು ಕಾಲೇಜಿನ ಪ್ರಾಂಶುಪಾಲೆ ಪದ್ಮರಮೇಶ್ ತಿಳಿಸಿದ್ದಾರೆ.



.ಕೃಪಾನಿಗೆ ಮಾಲ್ಯ ಮಾಪನದಲ್ಲಿ 600 ಕ್ಕೆ 583 ಅಂಕ ಲಭಿಸಿತ್ತು. ಮರು ಮೌಲ್ಯ ಮಾಪನಕ್ಕೆ ಅರ್ಜಿ ಸಲ್ಲಿಸಿದ್ದಳು. ಮರು ಮೌಲ್ಯ ಮಾಪನದ ನಂತರ ಕನ್ನಡದಲ್ಲಿ 5 ಅಂಕ ಹಾಗೂ ಅರ್ಥ ಶಾಸ್ತ್ರದಲ್ಲಿ 4 ಅಂಕ ಹೆಚ್ಚುವರಿಯಾಗಿ ಲಭಿಸಿದೆ.
ಈಗ 600 ಕ್ಕೆ 592 ಅಂಕ ಬಂದಿದ್ದು ವಾಣಿಜ್ಯ ವಿಭಾಗದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಗಳಿಸಿ ದ್ದಾಳೆ. ಉತ್ತಮ ಅಂಕ ಪಡೆದ ಕು.ಕೃಪಾನಿ ಅವರನ್ನು ಕಾಲೇಜು ಆಡಳಿತ ಮಂಡಳಿ, ಪ್ರಾಂಶುಪಾಲರು, ಉಪನ್ಯಾಸಕರು ಅಭಿನಂದಿಸಿದ್ದಾರೆ.



ಅಡಕೆ ಧಾರಣೆ

ಶಿವಮೊಗ್ಗ

ಸರಕು	55199 - 94099
ಬೆಟ್ಟೆ	45299 - 63630
ರಾಶಿಇಡಿ	42009 - 56099
ಗೊರಬಲು	19010 - 43339

ಕಾಫಿ ಧಾರಣೆ

ಅರೇಬಿಕಾ ಪಾರ್ಚ್‌ಮೆಂಟ್	23,600
ಅರೇಬಿಕಾ ಚೆರ್ರಿ	14,050
ರೋಬಸ್ಟಾ ಪಾರ್ಚ್‌ಮೆಂಟ್	18,150
ರೋಬಸ್ಟಾ ಚೆರ್ರಿ	9,800

ರಬ್ಬರ್ ಧಾರಣೆ

ಆರ್‌ಎಸ್‌ಎಸ್ (4)	246.00
ಆರ್‌ಎಸ್‌ಎಸ್ (5)	241.00
ಲಾಟ್ ಶೀಟ್	212.00



ಶೃಂಗೇರಿ ನೂತನ ಶಾಸಕ ಜೀವರಾಜ್ ಸೋಮವಾರ ಮಾಜಿ ಮುಖ್ಯಮಂತ್ರಿ, ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದರು.



ತರೀಕೆರೆ ಕಂಬದಬೀದಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಗುರುವಂದನಾ ಕಾರ್ಯಕ್ರಮದಲ್ಲಿ ಶಿಕ್ಷಕರಾದ ಕೆಂಚಪ್ಪ, ಶಿವಣ್ಣ, ಮುರುಗೇಶಪ್ಪ, ಕಮಲಮ್ಮ, ಜಾನ್ಹವಿ, ವೀಣಾ, ಕಮಲಮ್ಮ, ಹೇಮಾವತಿ, ಇಂದ್ರಮ್ಮ, ವಿಶಾಲಾಕ್ಷಮ್ಮ, ಮಂಜುಳಮ್ಮ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಬದುಕು ನೀಡಿದ ಸರ್ಕಾರಿ ಶಾಲೆ: ರಾಮಚಂದ್ರಪ್ಪ

ತರೀಕೆರೆ: ಸರ್ಕಾರಿ ಶಾಲೆಗಳು ವಿದ್ಯಾರ್ಥಿಗಳಿಗೆ ಬದುಕು ಕಟ್ಟಿಕೊಟ್ಟಿದೆ ಎಂದು ಕಂಬದಬೀದಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯ ರಾಮ ಚಂದ್ರಪ್ಪ ಎಂ.ಬಿ. ಹೇಳಿದ್ದಾರೆ. ಕಂಬದಬೀದಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1999-2000ನೇ ಸಾಲಿನ ವಿದ್ಯಾರ್ಥಿಗಳಿಂದ ನಡೆದ ಗುರು ವಂದನಾ ಕಾರ್ಯಕ್ರಮದಲ್ಲಿ ಮಾತನಾಡಿ ಇಂತಹ ಶಾಲೆ ಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಾವು ಪುಣ್ಯ ವಂತರು. ವಿದ್ಯಾರ್ಥಿಗಳನ್ನು ಸ್ನೇಹಿತರಂತೆ ಕಾಣಬೇಕು. ಶಿಕ್ಷಣ ಹರಿಯುವ ನೀರಿದ್ದಂತೆ ಸಂಘಟನೆಯಿಂದ ಇಂತಹ ಉತ್ತಮ ಕಾರ್ಯಕ್ರಮ ನೇರವೇರಿಸಲು ಸಾಧ್ಯ. ಕಂಬದ ಬೀದಿ ಶಾಲೆ ಪಟ್ಟಣದ ಹೃದಯ ಭಾಗದಲ್ಲಿದೆ. ಪೋಷಕರು ಮಕ್ಕಳಿಗೆ ಸಮಯ ಕೊಡಬೇಕು. ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು ಎಂದರು. 1999-2000ನೇ ಸಾಲಿನ ಎಲ್ಲಾ ವಿದ್ಯಾರ್ಥಿಗಳು ಕಾರ್ಯ ಕ್ರಮದಲ್ಲಿ ಭಾಗವಹಿಸಿ ತಮ್ಮ ಅನಿಸಿಕೆ ಹಂಚಿಕೊಂಡರು. ಶಿಕ್ಷಕರಾದ ಕೆಂಚಪ್ಪ, ಶಿವಣ್ಣ, ಮುರುಗೇಶಪ್ಪ, ಕಮ ಲಮ್ಮ, ಜಾನ್ಹವಿ, ವೀಣಾ, ಕಮಲಮ್ಮ, ಹೇಮಾವತಿ, ಇಂದ್ರಮ್ಮ, ವಿಶಾಲಾಕ್ಷಮ್ಮ, ಮಂಜುಳಮ್ಮ, ಮಾತನಾ ಡಿದರು.ದುರ್ಗಮ್ಮ ದೇವಸ್ಥಾನದಿಂದ ಮಂಗಳ ವಾದ್ಯದೊಂದಿಗೆ ಗುರುಗಳನ್ನು ಸ್ವಾಗತಿಸಿ ಪಾದಪೂಜೆ ಮಾಡಲಾಯಿತು. ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸೋಲು ಒಪ್ಪಿಕೊಂಡು ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸಿ

ರಾಜೇಗೌಡಗೆ ನೂತನ ಶಾಸಕ ಡಿ.ಎನ್.ಜೀವರಾಜ್ | ಚುನಾವಣಾಧಿಕಾರಿ ಗೌರವ್ ಕುಮಾರ್‌ರಿಂದ ಪ್ರಮಾಣಪತ್ರ ಸ್ವೀಕಾರ


• **ಕನ್ನಡಪ್ರಭ ವಾರ್ತೆ** ಚಿಕ್ಕಮಗಳೂರು

ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ.ರಾಜೇಗೌಡ ದಾರಿ ತಪ್ಪಿಸುವ ಕೆಲಸ ಮಾಡುವುದಕ್ಕೆ ಹೊರಟಿದ್ದು, ಇದೆಲ್ಲಾ ಪ್ರಜಾಪ್ರಭುತ್ವದಲ್ಲಿ ಬೇಡ. ಈ ಸೋಲನ್ನು ಒಪ್ಪಿಕೊಂಡು ಕ್ಷೇತ್ರದ ಅಭಿವೃದ್ಧಿಗೆ ಸಹಕಾರ ನೀಡಲಿ ಎಂದು ಶೃಂಗೇರಿ ಶಾಸಕ ಡಿ.ಎನ್.ಜೀವರಾಜ್ ಹೇಳಿದರು.

ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ಮರು ಎಣಿಕೆ ಚುನಾವಣಾಧಿಕಾರಿ ಗೌರವ್ ಕುಮಾರ್ ಶೆಟ್ಟಿ ಅವರ ಸರ್ಕಾರಿ ನಿವಾಸದ ಆವರಣ ದಲ್ಲಿಯೇ ನೂತನ ಶಾಸಕ ಡಿ.ಎನ್.ಜೀವರಾಜ್ ಅವರಿಗೆ ಸೋಮವಾರ ನೀಡಿದ ಪ್ರಮಾಣ ಪತ್ರ ಸ್ವೀಕರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ ದರು. ಆರೋಪ ಮಾಡುವ ಮೂಲಕ ಕಾಂಗ್ರೆಸ್ ಹಾಗೂ ರಾಜೇಗೌಡ ಅವರು ತಮ್ಮ ಗೌರವ ಉಳಿಸಿಕೊಳ್ಳುವ ಕೆಲಸಕ್ಕೆ ಮುಂದಾಗಿದ್ದಾರೆ. ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ಇದು ಯಾವುದೂ ನಡೆಯು ವುದಿಲ್ಲ. ಶೃಂಗೇರಿ ಕ್ಷೇತ್ರದ ಅಭಿವೃದ್ಧಿಗೆ ಸಹಕಾರ ನೀಡಿ ಎಂದಿದ್ದಾರೆ.

ರಾಜೇಗೌಡ ಅವರು ಈಗ ಕೇಳುತ್ತಿರುವ ಪ್ರಶ್ನೆ ಮತ್ತು ವಾದಗಳಲ್ಲಿ ಸೋಲಿನ ಹತಾಶೆ ಬಿಟ್ಟರೆ ಬೇರೆ ಏನು ಕಾಣುತ್ತಿಲ್ಲ. 25 ಅಂಚೆ ಮತದ 3 ಕಟ್ಟಿನಲ್ಲಿ ಅಸಿಂಧು ಮತಗಳು ಇದ್ದವು. ಅದು ಹೇಗೆ ಸಾಧ್ಯ ಎಂದು ರಾಜೇಗೌಡ ಪ್ರಶ್ನೆ ಮಾಡಿದ್ದಾರೆ. 2023ರ ಚುನಾವಣೆ ಮತ ಎಣಿಕೆ ಬಳಿಕ ಅಂದೇ ಈ ಬಗ್ಗೆ ನಾವು ದೂರು ಸಲ್ಲಿಸಲಾಗಿತ್ತು. ಅಸಿಂಧು ಮತಗಳನ್ನು ಕಾಂಗ್ರೆಸ್ ಅಭ್ಯರ್ಥಿಗೆ ಹಾಕಿ ಟಾಪ್ ಅಫ್ ಮಾಡಿ ಗೆಲ್ಲಿಸಲಾಗಿತ್ತು ಎಂಬುದೇ ನಮ್ಮ ಆರೋಪ. ಅದನ್ನೇ ನ್ಯಾಯಾಲಯದಲ್ಲಿ ಪ್ರಶ್ನೆ ಮಾಡಲಾಗಿತ್ತು ಎಂದು ಸ್ಪಷ್ಟಪಡಿಸಿದರು.

ರಾಜೇಗೌಡ ಅವರಿಗೆ ಎಲ್ಲವೂ ಗೊತ್ತಿತ್ತು. ಹಾಗಾಗಿಯೇ ನ್ಯಾಯಾಲಯದಲ್ಲಿ ವಿರೋಧ ಮಾಡಿದರು. ಸುಪ್ರಿಂ ಕೋರ್ಟ್‌ಗೆ ಮೊರೆ ಹೋದರು. ನ್ಯಾಯಾಲಯ ಮರು ಎಣಿಕೆ ಆದೇಶ ಮಾಡಿದ ದಿನವೂ ಸಹ ಸುಪ್ರಿಂ ಕೋರ್ಟ್‌ಗೆ ಹೋಗುವುದಾಗಿ ಹೇಳಿದ್ದರು. ಈ ಬಗ್ಗೆ ಸ್ಥಳೀಯ ಮಾಧ್ಯಮಕ್ಕೆ ಹೇಳಿಕೆ ನೀಡುವಾಗ ಮತ ಎಣಿಕೆಯಲ್ಲಿ ಲೋಪ ಉಂಟಾಗಿದ್ದರೆ ಅಧಿಕಾರಿಗಳು ಹೊಣೆ ಎಂಬ ರಾಜೇಗೌಡರು ಹೇಳಿಕೆ ನೀಡಿರುವುದನ್ನು ಗಮನಿಸಬಹುದಾಗಿದೆ ಎಂದರು.



ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ಮರು ಎಣಿಕೆಯಲ್ಲಿ ಬಹುಮತ ಗಳಿಸಿದ ಬಿಜೆಪಿಯ ಡಿ.ಎನ್. ಜೀವರಾಜ್ ಅವರಿಗೆ ಚುನಾವಣಾಧಿಕಾರಿ ಗೌರವ್ ಕುಮಾರ್ ಶೆಟ್ಟಿ ಸೋಮವಾರ ಪ್ರಮಾಣ ಪತ್ರ ನೀಡಿದರು. ಬಿಜೆಪಿ ಜಿಲ್ಲಾ ಅಧ್ಯಕ್ಷ ದೇವರಾಜ್ ಶೆಟ್ಟಿ, ಬಿಜೆಪಿ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ್ ಕೋಟ್ಯಾನ್ ಮೊದಲಾದವರಿದ್ದರು.

> **ಸುಧೀರ್ ಕುಮಾರ್ ಮುರೊಳ್ಳಿ ನೀಡಿರುವ ದೂರಿಗೆ ಸಂಬಂಧಿಸಿದಂತೆ ಕಾನೂನು ಅಭಿಪ್ರಾಯ ಪಡೆದುಕೊಂಡು ಎಫ್‌ಐಆರ್‌ದಾಖಲು ಮಾಡಿಕೊಂಡು ತನಿಖೆ ನಡೆಸಲಾಗುತ್ತಿದೆ.**
>
> • **ಜಿತೇಂದ್ರ ಕುಮಾರ್ ದಯಾಮ**
> ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಜನ ಗೆಲ್ಲಿಸಿದ್ದರು- ಘೋಷಣೆ ಮೂರು ವರ್ಷ ತಡ : ಶೃಂಗೇರಿ ಕ್ಷೇತ್ರದ ಜನರು 2023ರ ಚುನಾವಣೆಯ ಲ್ಲಿಯೇ ಗೆಲ್ಲಿಸಿದ್ದರು. ಆದರೆ, ಇಲ್ಲಿರುವವರು ಸೋಲಿಸಿದ್ದರು. ಹೀಗಾಗಿ, ಮೂರು ವರ್ಷದ ನಂತರ ಶಾಸಕನಾಗಿದ್ದೇನೆ ಎಂಬ ಪ್ರಮಾಣ ಪತ್ರ ಸ್ವೀಕರಿಸಿದ್ದೇನೆ. 2023ರ ಮೇ 13 ರಂದು ಮತ ಎಣಿಕೆ ಮುಕ್ತಾಯಗೊಳ್ಳುತ್ತಿದಂತೆ ಮರು ಎಣಿಕೆ ಮಾಡಿ ಎಂಬ ಸಲ್ಲಿಸಿದ್ದ ಮನವಿಯನ್ನು ತಿರಸ್ಕಾರ ಮಾಡಿ ರಾಜೇಗೌಡ ಅವರಿಗೆ ಶಾಸಕ ಸ್ಥಾನದ ಪ್ರಮಾಣ ಪತ್ರ ನೀಡಲಾಗಿತ್ತು. ಕಡಿಮೆ ಅಂತದಲ್ಲಿ ಫಲಿತಾಂಶ ಪ್ರಕಟಗೊಂಡಾಗ ಚುನಾವಣಾಧಿಕಾರಿ ಸ್ವಯಂ ಅಧಿಕಾರ ಬಳಕೆ ಮಾಡಿ ಕಡ್ಡಾಯವಾಗಿ ಮರು ಎಣಿಕೆ ಮಾಡಬೇಕು. ಆದರೆ, ಮನವಿ ಮಾಡಿದರೂ ಅಂದಿನ ಚುನಾವಣಾಧಿಕಾರಿ ಮರು ಎಣಿಕೆ ನಡೆಸಲಿಲ್ಲ. ಹೀಗಾಗಿ, ಇಷ್ಟೊಂದು ಗೊಂದಲ ತೊಂದರೆ ಉಂಟಾಗಿದೆ ಎಂದು ಆರೋಪಿಸಿದರು.

ಈಗ ಕಾಂಗ್ರೆಸ್ ಅಭ್ಯರ್ಥಿಯ ವಕೀಲರು ಟ್ಯಾಂಪರಿಂಗ್ ಬಗ್ಗೆ ಮಾತನಾಡುತ್ತಾರೆ. ಈ ಹಿಂದೆ ಕೋರ್ಟ್‌ಗೆ ನಾವೇ ಅರ್ಜಿ ಹಾಕಿ ಮತ ಪತ್ರಗಳನ್ನು ಕೋರ್ಟ್ ಅಧೀನಕ್ಕೆ ಪಡೆಯಬೇಕೆಂದು ಕೇಳಿದಾಗ ಏಕೆ ಸರ್ಕಾರದ ಬಗ್ಗೆ ನಿಮಗೆ ನಂಬಿಕೆ ಇಲ್ಲವಾ ಸುರಕ್ಷಿತವಾಗಿ ಇವೆ ಎಂಬ ಮಾತುಗಳು ಕೋರ್ಟ್‌ನಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ವಕೀಲರು ಹೇಳಿದ್ದರು. ಈಗ ಬಹಿರಂಗವಾಗಿ ಟ್ಯಾಂಪರಿಂಗ್ ಬಗ್ಗೆ ಮಾತನಾಡುತ್ತಿರುವುದಕ್ಕೆ ಯಾವುದೇ ಅರ್ಥವಿಲ್ಲ. ಅರ್ಹ ಜಯ ಸಿಕ್ಕಿದ್ದು, ಜನರ ಗೆಲ್ಲಿಸಿದ್ದಾರೆ ಎಂದು ಸಮರ್ಥಿಸಿಕೊಂಡರು.

ಆಯೋಗ ಇ ಮೇಲ್ ಬಂದ ಮೇಲೆ ಎಫ್‌ಐಆರ್: ಪೊಲೀಸರಿಗೆ ಈ ಕುರಿತು ಎಫ್‌ಐಆರ್ ದಾಖಲಿಸುವ ಅಧಿಕಾರವೇ ಇಲ್ಲ. ಚುನಾವಣಾ ಆಯೋಗ ಮಾಡಬೇಕು. ಒತ್ತಡಕ್ಕೆ ಒಳಗಾಗಿ ಎಫ್‌ಐಆರ್ ದಾಖಲಿಸಿದ್ದಾರೆ. ದೂರು ನೀಡಿದಾಗ ಎಫ್‌ಐಆರ್ ಮಾಡಿಲ್ಲ. ಎನ್‌ಸಿ ಮಾಡುತ್ತಾರೆ. ಶಾಸಕರಾಗಿ ಆಯ್ಕೆಯಾಗಿದ್ದೀರಿ ಎಂಬ ಇ ಮೇಲ್ ಭಾನುವಾರ ತಡ ರಾತ್ರಿ 12ಕ್ಕೆ ಬಂದ ಮೇಲೆ ಸೋಮವಾರ ಬೆಳಗಿನ ಜಾವ 4 ಕ್ಕೆ ಎಫ್‌ಐಆರ್ ದಾಖಲಿಸುತ್ತಾರೆ ಎಂದರೆ ಇದರ ಅರ್ಥ ಗಮನಿಸಬೇಕಿದೆ ಎಂದರು.

ಡಿಸಿಎಂ ರಕ್ಷಣೆಗೆ ಬರಬೇಕು- ಜೀವರಾಜ್: ಕಾಂಗ್ರೆಸ್‌ನ ಮುಖಂಡರು ಏಕಾಏಕಿ ಈ ರೀತಿಯ ಸೋಲನ್ನು ನಿರೀಕ್ಷೆ ಮಾಡಿರಲಿಲ್ಲ. ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಈ ಬಗ್ಗೆ ಕಾನೂನು ಹೋರಾಟ ಮಾಡುವುದಾಗಿ ಹೇಳಿದ್ದಾರೆ. ಡಿ.ಕೆ.ಶಿವ ಕುಮಾರ್ ನನಗೂ ಕೂಡ ಉಪ ಮುಖ್ಯಮಂತ್ರಿ. ಹೀಗಾಗಿ, ನನ್ನ ರಕ್ಷಣೆಗೆ ಡಿಸಿಎಂ ಬರಬೇಕು ಎಂದು ಜೀವರಾಜ್ ಮನವಿ ಮಾಡಿದರು.

ಡಿ.ಎನ್. ಜೀವರಾಜ್ ವಿರುದ್ಧ ಎಫ್‌ಐಆರ್

ಚಿಕ್ಕಮಗಳೂರು: ಜಿಲ್ಲೆಯ ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಅಕ್ರಮದ ಆರೋಪಕ್ಕೆ ಸಂಬಂಧಿಸಿದಂತೆ ಶೃಂಗೇರಿಯ ನೂತನ ಶಾಸಕ ಜೀವರಾಜ್ ಸೇರಿದಂತೆ ಮೂವರ ಮೇಲೆ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 2023ರ ಮೇ 13 ರಂದು ನಡೆದ ಅಂಚೆ ಮತಗಳ ಎಣಿಕೆ ವೇಳೆ ಅಕ್ರಮ ನಡೆದಿದೆ ಎಂಬ ಅನುಮಾನ ವ್ಯಕ್ತಪಡಿಸಿ, ಮತ ಎಣಿಕೆ ಟೇಬಲ್‌ನ ಕಾಂಗ್ರೆಸ್ ಅಭ್ಯರ್ಥಿಯ ಬೂತ್ ಏಜೆಂಟ್ ಹಾಗೂ ವಕೀಲ ಸುಧೀರ್‌ಕುಮಾರ್‌ಮುರೊಳ್ಳಿ ನೀಡಿದ ದೂರಿನ ಅನ್ವಯ ನಗರ ಪೊಲೀಸ್ ಠಾಣೆಯಲ್ಲಿ ಮೂರು ಮಂದಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಮೊದಲ ಆರೋಪಿಯಾಗಿ ಮತ ಎಣಿಕಾ ಕೇಂದ್ರ ಅಂದಿನ ಚುನಾವಣಾಧಿಕಾರಿ ವೇದಮೂರ್ತಿ, ಎರಡನೇ ಆರೋಪಿಯಾಗಿ ಬಿಜೆಪಿ ಅಭ್ಯರ್ಥಿ ಜೀವರಾಜ್ ಹಾಗೂ ಮೂರನೇ ಆರೋಪಿಯಾಗಿ ಅಂದಿನ ಜಿಲ್ಲಾ ಚುನಾವಣಾಧಿಕಾರಿ ರಮೇಶ್ ವಿರುದ್ಧ ಐಪಿಸಿ 1860 ಕಾಯ್ದೆ ಹಾಗೂ ಜನಪ್ರತಿನಿಧಿ ಕಾಯ್ದೆ 1951/1988 ಅಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಚಿಕ್ಕಮಗಳೂರು ಸಂದೀಪ್‌ಗೆ ವೇಣುಗೋಪಾಲ್ ಶ್ಲಾಘನೆ

ಚಿಕ್ಕಮಗಳೂರು: ಕೇರಳ ಚುನಾವಣೆ ಯಶಸ್ಸಿನ ಹಿಂದೆ ಚುನಾವಣಾ ಉಸ್ತುವಾರಿ ಚಿಕ್ಕಮಗಳೂರಿನ ಯುವ ನಾಯಕ ಸಂದೀಪ್ ಅವರನ್ನು ಎಐಸಿಸಿ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಚುನಾವಣಾ ಫಲಿತಾಂಶದ ಬಳಿಕ ತಬ್ಬಿ ಸಂಭ್ರಮಿಸಿದ್ದಾರೆ.



ಚಿಕ್ಕಮಗಳೂರಿನ ಕಾಂಗ್ರೆಸ್ ಯುವ ನಾಯಕ ಸಂದೀಪ್, ಕೇರಳ ಚುನಾವಣೆ ಉಸ್ತುವಾರಿಯಾಗಿ ಪರಿಣಾಮಕಾರಿ ಕಾರ್ಯತಂತ್ರ ರೂಪಿಸಿ ಪಕ್ಷದ ಹಿರಿಯ ನಾಯಕರ ಮಾರ್ಗ ದರ್ಶನದಲ್ಲಿ ಕೇರಳದ ರಾಜ ಕೀಯ ಪರಿಸ್ಥಿತಿ ಆಳವಾಗಿ ಅಧ್ಯಯನ ಮಾಡಿ, ಸ್ಥಳೀಯ ಸಮಸ್ಯೆಗಳು, ಜನರ ಮನೋ ಭಾವ ಮತ್ತು ಮತದಾರರ ನಿರೀಕ್ಷೆಗಳನ್ನು ಸಮಗ್ರವಾಗಿ ಅರ್ಥ ಮಾಡಿಕೊಂಡಿದ್ದರು.

ಗ್ರಾಮ ಮಟ್ಟದಿಂದ ನಗರ ಮಟ್ಟದವರೆಗೆ ಕಾರ್ಯಕರ್ತರನ್ನು ಸಂಘಟಿಸಿ, ಬಲವಾದ ತಂಡ ನಿರ್ಮಿಸಿ ಸಾಮಾಜಿಕ ಜಾಲ ತಾಣಗಳ ಬಳಕೆ, ಮನೆ ಮನೆಗೆ ತಲುಪುವ ಕಾರ್ಯಕ್ರಮಗಳು, ಯುವಕರನ್ನು ಆಕರ್ಷಿಸುವ ಮೂಲಕ ಕೇರಳ ಚುನಾವಣೆ ಜಯಕ್ಕೆ ಬಲವಾದ ಬೆಂಬಲ ನೀಡಿದ್ದಾರೆ.

ಸೋಮವಾರ ಕೇರಳದ ಕಾಂಗ್ರೆಸ್‌ನ ಯಶಸ್ಸಿನ ಕಥೆಯಲ್ಲಿ ಸಂದೀಪ್ ಅವರ ಶಕ್ತಿ ಮತ್ತು ನಿಷ್ಠೆಯ ಸಂಕೇತವಾಗಿ ಉಳಿದಿದೆ. ಇವರ ಪರಿಶ್ರಮಕ್ಕೆ ಚಿಕ್ಕಮಗಳೂರಿನ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ನಾಯಕರು ಶ್ಲಾಘಿಸಿದ್ದಾರೆ.

ಪೆಟ್ರೋಲ್, ಡೀಸೆಲ್ ಅಭಾವ: ಖರೀದಿಗೆ ಮುಗಿಬಿದ್ದ ಗ್ರಾಹಕರು

• **ಕನ್ನಡಪ್ರಭ ವಾರ್ತೆ** ಬಾಳೆಹೊನ್ನೂರು

ಪಟ್ಟಣದ ಎಲ್ಲಾ ಪೆಟ್ರೋಲ್ ಬಂಕುಗಳಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಅಭಾವ ಹೆಚ್ಚಾಗಿದ್ದರಿಂದ ಸೋಮವಾರ ಬಂಕ್‌ಗೆ ಬರುತ್ತಿದ್ದಂತೆ ಗ್ರಾಹಕರು ಇಂಧನಕ್ಕಾಗಿ ಮುಗಿಬಿದ್ದ ಘಟನೆ ನಡೆದಿದೆ.



ಪಟ್ಟಣದಲ್ಲಿ ಮೂರು ಪೆಟ್ರೋಲ್ ಪಂಪುಗಳಿದ್ದು, ಎಲ್ಲಾ ಬಂಕುಗಳಲ್ಲಿ ಕಳೆದ ಕೆಲವು ದಿನಗಳಿಂದ ಪೆಟ್ರೋಲ್, ಡೀಸೆಲ್ ಅಭಾವ ಹೆಚ್ಚಾಗಿದೆ. ಭಾನುವಾರ ಹಾಗೂ ಸೋಮ ವಾರ ಮೂರು ಬಂಕ್‌ಗಳಲ್ಲಿ ಪೆಟ್ರೋಲ್, ಡೀಸೆಲ್ ಖಾಲಿ ಯಾಗಿವೆ. ಇಂಧನಕ್ಕಾಗಿ ಗ್ರಾಹಕರು ತೀವ್ರ ಪರದಾಡಿದರು. ಎಲ್ಲಾ ಬಂಕುಗಳಲ್ಲಿಯೂ ನೋ ಸ್ಟಾಕ್ ಬೋರ್ಡುಗಳು ಎದ್ದು ಕಾಣುತ್ತಿತ್ತು.

ಸೋಮವಾರ ಸಂಜೆ ಪಟ್ಟಣದ ಕೊಪ್ಪ ರಸ್ತೆ ರಂಭಾಪುರಿ ಪೆಟ್ರೋಲ್ ಬಂಕಿಗೆ ಇಂಧನ ತುಂಬಿದ ಲಾರಿ ಬಂದು ಅನ್‌ಲೋಡ್ ಆದ ವಿಚಾರ ತಿಳಿಯುತ್ತಿದ್ದಂತೆ ಗ್ರಾಹಕರು ತಮ್ಮ ವಾಹನಗಳೊಂದಿಗೆ ಬಂಕ್‌ಗೆ ಬಂದು ಇಂಧನಕ್ಕಾಗಿ ಮುಗಿಬಿದ್ದರು. ವಾಹನಗಳು ಒಮ್ಮೆಲೆಗೆ ಬಂದ ಪರಿಣಾಮ ಬಂಕ್ ಸಿಬ್ಬಂದಿ ಇಂಧನ ಹಾಕಲು ಪರದಾಡಿದರು. ಮುಖ್ಯರಸ್ತೆಯಲ್ಲೂ ಕೆಲವು ಕಾಲ ವಾಹನ ಸಂಚಾರ ಅಸ್ತವ್ಯಸ್ತವಾಯಿತು. ಕೂಡಲೇ ಸ್ಥಳಕ್ಕೆ ಪೊಲೀಸರು ಬಂದು ವಾಹನಗಳನ್ನು ನಿಯಂತ್ರಿಸಿದರು. ಹಲವರು ಬಾಟಲಿ, ಕ್ಯಾನ್‌ಗಳನ್ನು ಇಂಧನಕ್ಕಾಗಿ ತಂದಿದ್ದು, ಬಂಕಿನಲ್ಲಿ ವಾಹನಗಳಿಗೆ ಮಾತ್ರ ಇಂಧನ ಹಾಕಿ ಆದ್ಯತೆ ನೀಡಿ ಬಾಟಲಿ, ಕ್ಯಾನ್‌ಗಳಲ್ಲಿ ಇಂಧನ ತುಂಬಲು ನಿರಾಕರಿಸಿದರು.

ಸದ್ವಿದ್ಯಾ ಪಬ್ಲಿಕ್ ಶಾಲೆಗೆ ಸತತ ಮೂರನೇ ಬಾರಿಗೆ ಶೇ. 100 ಫಲಿತಾಂಶ





ತರೀಕೆರೆ: ನಗರದ ಸದ್ವಿದ್ಯಾ ಪಬ್ಲಿಕ್ ಶಾಲೆ ಎಸ್.ಎಸ್.ಎಲ್ .ಸಿ.ಪರೀಕ್ಷೆಯಲ್ಲಿ ಸತತ ಮೂರನೇ ಬಾರಿಯೂ ಶೇ. 100 ಫಲಿತಾಂಶ ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದೆ. ಶ್ರೇಯ ಎ ಬೇದ್ರೆ ಮತ್ತು ಪ್ರೀತಮ್ ಎಂ ಆರ್ ಎಂಬ ವಿದ್ಯಾರ್ಥಿಗಳು ಇಬ್ಬರೂ ಸಹ ಶೇ. 87. 52 ಫಲಿತಾಂಶ ಪಡೆಯುವ ಮೂಲಕ ಶಾಲೆಗೆ ಒಳ್ಳೆಯ ಕೀರ್ತಿ ತಂದಿದ್ದಾರೆ. ಮತ್ತು ಡಿಸ್ಟಿಂಕ್ಷನ್ ಮೂರು ವಿದ್ಯಾರ್ಥಿಗಳು ಫಸ್ಟ್ ಕ್ಲಾಸ್ 9 ವಿದ್ಯಾರ್ಥಿ ಗಳು ಮತ್ತು ಸೆಕೆಂಡ್ ಕ್ಲಾಸ್ ಆರು ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶಾಲೆಗೆ ಶೇ. ನೂರರಷ್ಟು ಫಲಿತಾಂಶ ತಂದು ಕೊಟ್ಟಿದ್ದಾರೆ. ಶಾಲೆಯ ಪ್ರಾಂಶುಪಾಲರಾದ ಹರ್ಷಿಣಿ ಡಿಆರ್ ಮಕ್ಕಳ ಸಾಧನೆಯನ್ನು ಮೆಚ್ಚಿ ಶ್ಲಾಘಿಸಿದ್ದಾರೆ.

ಪೌರ ಕಾರ್ಮಿಕರ ಸ್ವಚ್ಛತಾ ಸೇವೆಗೆ ಬೆಲೆ ಕಟ್ಟಲಾಗದು: ಎಂ.ಪಿ. ಸನ್ನಿ

ಗದ್ದೇಮನೆ ವಿಶ್ವನಾಥ್ ಟ್ರಸ್ಟ್‌ನಿಂದ ಪೌರ ಕಾರ್ಮಿಕರಿಗೆ ಕಿಟ್



ನರಸಿಂಹರಾಜಪುರ ತಾಲಕು ಗದ್ದೇಮನೆ ವಿಶ್ವನಾಥ ಚಾರಿಟಬಲ್ ಟ್ರಸ್ಟ್ ವತಿಯಿಂದ ಪಟ್ಟಣ ಪಂಚಾಯಿತಿ ಪೌರ ಕಾರ್ಮಿಕರಿಗೆ ಸ್ವಚ್ಛತೆಗೆ ಬೇಕಾದ ಕಿಟ್ ಗಳನ್ನು ವಿತರಿಸಲಾಯಿತು.

• **ಕನ್ನಡಪ್ರಭ ವಾರ್ತೆ** ನರಸಿಂಹರಾಜಪುರ

ಹಗಲು ರಾತ್ರಿ ಎನ್ನದೆ ಪಟ್ಟಣವನ್ನು ಸ್ವಚ್ಛಗೊಳಿಸುವ ಪೌರ ಕಾರ್ಮಿಕರ ಸೇವೆಗೆ ಬೆಲೆ ಕಟ್ಟಲಾಗುದು ಎಂದು ಗದ್ದೇಮನೆ ವಿಶ್ವನಾಥ್ ಚಾರಿಟಬಲ್ ಟ್ರಸ್ಟ್ ಸದಸ್ಯ ಎಂ.ಪಿ.ಸನ್ನಿ ಹೇಳಿದರು.

ಶುಕ್ರವಾರ ಪ.ಪಂ. ಆವರಣದಲ್ಲಿ ಪೌರ ಕಾರ್ಮಿಕರಿಗೆ ಗದ್ದೇಮನೆವಿಶ್ವನಾಥ್ ಚಾರಿಟಬಲ್ ಟ್ರಸ್ಟ್ ನಿಂದ ಸ್ವಚ್ಛತೆಗೆ ಬೇಕಾದ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು. ಈಗಾಗಲೇ ಗದ್ದೇಮನೆ ವಿಶ್ವನಾರ್ಥ ಚಾರಿಟಬಲ್ ಟ್ರಸ್ಟ್ ನಿಂದ ಅನೇಕ ಸೇವಾ ಕಾರ್ಯ ಮಾಡಲಾಗಿದೆ. ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೆ ಸ್ವೆಟರ್, ಪುಸ್ತಕಗಳು, ಲೇಖನ ಸಾಮಾಗ್ರಿಗಳು ಹಾಗೂ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಿಸಲಾಗಿದೆ. ಪ.ಪಂ. ಪೌರ ಕಾರ್ಮಿಕರಿಗೆ ಪಟ್ಟಣದ ಸ್ವಚ್ಛತೆ ಕಾರ್ಯ ಮಾಡಲು ಅವರ ಸುರಕ್ಷತೆಗೆ ಸಲಕರಣೆಗಳ ಅವಶ್ಯಕತೆ ಇದೆ. ಅವರು ಒಂದು ದಿನ ತಮ್ಮ ಕರ್ತವ್ಯ ಮಾಡದೆ ಹೋದರೆ ಪಟ್ಟಣದ ನೈರ್ಮಲ್ಯವೇ ಹಾಳಾಗುತ್ತದೆ. ಅವರ ಸೇವೆ ಮನಗಂಡು ಇಂದು ಸ್ವಚ್ಛತಾ ಕಾರ್ಯಕ್ಕೆ ಬೇಕಾದ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದರು.

ಟ್ರಸ್ಟ್ ಸದಸ್ಯ ಗದ್ದೇಮನೆ ಸತೀಶ್ ಮಾತನಾಡಿ, ಪೌರ ಕಾರ್ಮಿಕರು ತಮ್ಮ ಆರೋಗ್ಯ ಲೆಕ್ಕಿಸದೆ ಕರ್ತವ್ಯ ನಿರ್ವಹಿಸುತ್ತಾರೆ. ಅವರ ಸುರಕ್ಷತೆ ಜೊತೆಗೆ ಅವರ ಆರೋಗ್ಯದ ಸುರಕ್ಷತೆಯೂ ಮುಖ್ಯವಾಗಿದೆ. ಆದ್ದರಿಂದ ನಮ್ಮ ಚಾರಿಟಬಲ್ ಟ್ರಸ್ಟ್ ನಿಂದ ಯಾವುದೇ ಪ್ರತಿಫಲಾಕ್ಷೆ ಇಲ್ಲದೆ ಕಿಟ್‌ಗಳನ್ನು ವಿತರಿಸಲಾಗುತ್ತಿದೆ. ಪೌರ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆಯೂ ಗಮನಹರಿಸಬೇಕೆಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗದ್ದೇಮನೆ ವಿಶ್ವನಾಥ್ ಫ್ಯಾನ್ಸ್ ಕ್ಲಬ್ ಅಧ್ಯಕ್ಷ ಮುರುಳಿ, ಫ್ಯಾನ್ಸ್ ಕ್ಲಬ್ ಸದಸ್ಯ ಅಜಿತ್, ಗದ್ದೇಮನೆ ವಿಶ್ವನಾಥ್ ಚಾರಿಟಬಲ್ ಟ್ರಸ್ಟ್ ಸದಸ್ಯರಾದ ಎಂ.ಪಿ.ಮನು,ಸಚಿನ್, ರೀನಾಬೆನ್ನಿ,ಎಲಿಯಾಸ್,ಸಾಜು, ಪ್ರದೀಪ್ ಇದ್ದರು.

ಮಹಿಳಾ ದಿನಾಚರಣೆ | ಕಡೂರು ಆರೋಗ್ಯ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಕೆ.ಎಸ್.ಆನಂದ್ ಸಲಹೆ

ಆರೋಗ್ಯ ಇಲಾಖೆ ಅಧಿಕಾರಿ, ನೌಕರರ ನಿಸ್ವಾರ್ಥ ಸೇವೆ ಸ್ಮರಿಸಿ

• **ಕನ್ನಡಪ್ರಭ ವಾರ್ತೆ** ಕಡೂರು

ಕೊರೋನಾ ಕಾಲಘಟ್ಟದ ಕರಾಳ ನೆನಪಿನ ದಿನಗಳಲ್ಲಿ ತಮ್ಮ ಪ್ರಾಣವನ್ನೂ ಲೆಕ್ಕಿಸದೆ ಜನರನ್ನು ಉಳಿಸಲು ಹಗಲಿರುಳೂ ಶ್ರಮಿಸಿದ ಆರೋಗ್ಯ ಇಲಾಖೆ ಅಧಿಕಾರಿ, ನೌಕರರ ನಿಸ್ವಾರ್ಥ ಸೇವೆಯನ್ನು ಎಲ್ಲರೂ ಕೃತಜ್ಞತೆ ಯಿಂದ ಸ್ಮರಿಸಬೇಕು ಎಂದು ಶಾಸಕ ಕೆ.ಎಸ್. ಆನಂದ್ ಹೇಳಿದರು.

ಶುಕ್ರವಾರ ಪಟ್ಟಣದ ಹೊರವಲಯದ ಹೆರಿಟೇಜ್ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ಸಹಯೋಗದಲ್ಲಿ ಮಹಿಳಾ ದಿನಾ ಚರಣೆ ಪ್ರಯುಕ್ತ ನಡೆದ ಕಡೂರು ಆರೋಗ್ಯ ಉತ್ಸವ- 2026 ಉದ್ಘಾಟಿಸಿ ಮಾತನಾಡಿ ಜನತೆ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ ಶ್ರಮ ಮಹತ್ವ ದ್ದು. ಕ್ಷೇತ್ರದ ಎರಡು ಸಾರ್ವಜನಿಕ ಆಸ್ಪತ್ರೆ ಗಳಲ್ಲಿ ಅಗತ್ಯ ಸೌಲಭ್ಯಗಳು ಈಗ ಲಭ್ಯವಿದೆ. ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸೇವೆ ಸಮರ್ಪಕವಾಗಿ ದೊರೆಯುತ್ತಿದೆ.



ಕಡೂರು ಪಟ್ಟಣದ ಹೆರಿಟೇಜ್ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ಸಹಯೋಗದ ಮಹಿಳಾ ದಿನಾಚರಣೆ ಪ್ರಯುಕ್ತ ನಡೆದ ಕಡೂರು ಆರೋಗ್ಯ ಉತ್ಸವ- 2026 ಕಾರ್ಯಕ್ರಮವನ್ನು ಶಾಸಕ ಕೆ.ಎಸ್.ಆನಂದ್ ಉದ್ಘಾಟಿಸಿದರು.

ಕಡೂರು ಪಟ್ಟಣ ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು, ಅದಕ್ಕೆ ತಕ್ಕಂತೆ ಆರೋಗ್ಯ ಸೇವೆ ವಿಸ್ತರಣೆ ಅತ್ಯಂತ ಅವಶ್ಯಕ. ಈ ನಿಟ್ಟಿನಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಲು ಶ್ರಮಿಸುತ್ತೇನೆ. ಜನರ ಆರೋಗ್ಯಕ್ಕಾಗಿ ಶ್ರಮಿ ಸುತ್ತಿರುವ ಆರೋಗ್ಯ ಇಲಾಖೆ ನೌಕರರ ಏಕತಾನತೆ ಹೋಗಲಾಡಿಸಲು ಇಂತಹ ಕಾರ್ಯಕ್ರಮ ಆಯೋಜನೆ ಅಗತ್ಯ ಎಂದು ಶ್ಲಾಘಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವಥ್ ಬಾಬು ಮಾತ ನಾಡಿ, ಕ್ಷೇತ್ರದ ಆರೋಗ್ಯದ ಬಗ್ಗೆ ಅಪಾರ ಕಾಳಜಿ ಉಳ್ಳ ಶಾಸಕರು ಹಿರೇನಲ್ಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಜಾಗವನ್ನು ಇಲಾಖೆಗೆ ಉಳಿಸಿಕೊಟ್ಟಿದ್ದಾರೆ. ಕಡೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ಗಾಗಿ ಪ್ರಸ್ತಾವನೆ ಕಳುಹಿಸಲಾಗಿದೆ. ಶಾಸಕರು ಈ ಕುರಿತು ಗಮನ ಹರಿಸಬೇಕು ಎಂದು ಕೋರಿದರು.

ತಾಲೂಕು ಆಡಳಿತ ವೈದ್ಯಾಧಿಕಾರಿ ಡಾ. ಶ್ರೀನಿವಾಸ್ ದತ್ತಾತ್ರಿ ಮಾತನಾಡಿ, ಆರೋಗ್ಯ ಇಲಾಖೆ ಎಲ್ಲ ನೌಕರರು ಪ್ರತಿ ಕ್ಷಣ ಜನರ ಆರೋಗ್ಯಕ್ಕಾಗಿ ನಿರಂತರ ಶ್ರಮಿಸುತ್ತಾರೆ. ಇಲಾಖೆ ವ್ಯಾಪ್ತಿಯಲ್ಲಿ 29 ಆಸ್ಪತ್ರೆಗಳಿದ್ದು, 800 ನೌಕರರಿದ್ದು, ಅವರಿಗೆ ವೈಯುಕ್ತಿಕವಾಗಿ ಕಳೆಯಲು ಒಂದಿಷ್ಟು ಸಮಯ ದೊರೆಯು ವುದು ತೀರಾ ಕಡಿಮೆ. ಆದ್ದರಿಂದ ಅವರ ಏಕತಾನತೆ ಹೋಗಲಾಡಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಮಹಿಳಾ ನೌಕರರಿಗೆ ಅನೇಕ ಆಟ ಆಯೋಜಿಸಿ ಆರೋಗ್ಯ ಇಲಾಖೆ ಎಲ್ಲ ನೌಕರರ ಸಮ್ಮಿಲನ ಏರ್ಪಡಿಸಲಾಗಿದೆ ಎಂದರು.

ತಾಲೂಕಿನ ಎಲ್ಲ ಆರೋಗ್ಯ ಇಲಾಖೆಗಳ ನೌಕರರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆ ಯಿತು. ಆಟೋಟ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಡಾ.ಮಂ ದಾರ-ಡಾ.ಭಾರ್ಗವಿ ನೀಡಿದ ಭರತನಾಟ್ಯ ಗಮನ ಸೆಳೆಯಿತು. ಡಾ.ಉಮೇಶ್, ಡಾ. ಚಂದಾ, ಆರೋಗ್ಯ ಶಿಕ್ಷಣಾಧಿಕಾರಿ ಮಮ ತಾ, ಡಾ. ಶಿವಕುಮಾರ್, ಡಾ.ಶಶಿಕಲಾ, ಡಾ.ಸೀಮಾ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ತಾಲೂಕಿನ ಆರೋಗ್ಯ ಇಲಾಖೆಯ ನೌಕರರು, ಆಶಾ ಕಾರ್ಯಕರ್ತೆಯರು ಮತ್ತಿತರರು ಇದ್ದರು.

ಸುದ್ದಿ ಸಿಂಚನ

ಶೃಂಗೇರಿಯಲ್ಲಿ ಬಿಜೆಪಿ ವಿಜಯೋತ್ಸವ ಆಚರಣೆ

ಶೃಂಗೇರಿ: ಪಂಚರಾಜ್ಯಗಳ ವಿಧಾಸಭಾ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಪುದುಚೇರ,ಅಸಾಂರಾಜ್ಯಗಳಲ್ಲಿ ಬಿಜೆಪಿ ಜಯಬೇರಿ ಬಾರಿಸಿರುವ ಹಿನ್ನೆಲೆ ಯಲ್ಲಿ ಪಟ್ಟಣದ ಬೇಗಾನೆ ರಾಮಯ್ಯ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಸೋಮವಾರ ಸಂಜೆ ವಿಜಯೋತ್ಸವ ಆಚರಿಸಿದರು. ಬಿಜೆಪಿ ಮುಖಂಡ ಹರೀಶ್ ಶೆಟ್ಟಿ ಮಾತನಾಡಿ ಬಿಜೆಪಿ ಗೆಲುವು ಸಂತಸದ ವಿಷಯ. ಪಶ್ಚಿಮ ಬಂಗಾಳದಲ್ಲಿ ಅಭೂತಪೂರ್ವ ಜಯಗಳಿಸಿದ್ದು ಇಡೀ ದೇಶದ ಗೆಲುವು ಸಾಧಿಸಿದಂತಾಗಿದೆ. ಈ ಗೆಲುವನ್ನು ಡಾ.ಶಾಂಪ್ರಸಾದ್ ಮುಖರ್ಜಿಗೆ ಅರ್ಪಿಸುತ್ತಿದ್ದೇವೆ.ಪಕ್ಷಕ್ಕಾಗಿ ಬಂಗಾಳದಲ್ಲಿ ಸಾವಿರಾರು ಕಾರ್ಯಕರ್ತರು ಹುತಾತ್ಮರಾಗಿದ್ದಾರೆ. ನಮ್ಮ ಸಂಘಟನೆ ಕಾರ್ಯ ಕರ್ತರು, ಪಕ್ಷದ ಕಾರ್ಯಕರ್ತರು ಅನೇಕ ವರ್ಷಗಳಿಂದ ಸಾಕಷ್ಟು ದಬ್ಬಾಳಿಕೆ, ದೌರ್ಜನ್ಯ ಎದುರಿಸಿ ಕೆಲವರು ಪ್ರಾಣತ್ಯಾಗ ಮಾಡಿದ್ದಾರೆ. ಇದರ ಹಿಂದೆ ಕಾರ್ಯಕರ್ತರ, ನಾಯಕರ ತ್ಯಾಗ,ಪರಿಶ್ರಮವಿದೆ ಎಂದರು. ತಾಲೂಕು ಬಿಜೆಪಿ ಅಧ್ಯಕ್ಷ ತಲಗಾರು ಉಮೇಶ್ ಭಟ್ ಮಾತನಾಡಿ ಮೋದಿ ನಾಯಕತ್ವದಿಂದ ದೇಶ ಪ್ರಗತಿ ಪಥದಲ್ಲಿ ಸಾಗಿದೆ. ಇಡೀ ವಿಶ್ವವೇ ಭಾರತದತ್ತ ತಿರುಗಿ ನೋಡುತ್ತಿದೆ. ಎಂದರು. ಮುಖಂಡರಾದ ನೂತನ್ ಕುಮಾರ್, ಎಚ್.ಎಸ್ ವೇಣುಗೋಪಾಲ್, ದಿನೇಶ್ ಅಂಗುರ್ಡಿ, ವಿಜಯ್ ತಿಪ್ಪನಮಕ್ಕಿ,ಅರುಣ್ ಕುಮಾರ್ ನೂರಾರು ಕಾರ್ಯಕರ್ತರು ಇದ್ದರು.

ಇಂದು ಶೃಂಗೇರಿ ಬಂದ್

ಶೃಂಗೇರಿ: ಸಿಇಟಿ ಪರೀಕ್ಷೆ ಬರೆಯುತ್ತಿದ್ದ ವಿದ್ಯಾರ್ಥಿಗಳ ಜನಿವಾರ ತೆಗೆಸಿರುವ ಘಟನೆ ಖಂಡಿಸಿ ತಾಲೂಕು ಬ್ರಾಹ್ಮಣ ಮಹಾ ಸಭಾ ಸೇರಿದಂತೆ ಜನಿವಾರ ಧರಿಸುವ ವಿವಿಧ ಸಮುದಾಯ ಸಂಘಟನೆಗಳು ಮೇ 5 ರ ಮಂಗಳವಾರ ಶೃಂಗೇರಿ ಬಂದ್ ನಡೆಸುತ್ತಿದೆ. ಬೆಳಿಗ್ಗೆ 9 ರಿಂದ ಮದ್ಯಾಹ್ನದ ವರೆಗೆ ಬಂದ್‌ಗೆ ಕರೆ ನೀಡಿದ್ದು, ರಾಜಾನಗರದ ವಿದ್ಯಾಭಾರತೀ ಸಭಾ ಭವನ ದಿಂದ ಭಾರತೀ ಬೀದಿ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಿ ತಾಲೂಕು ಕಚೇರಿ ಎದುರು ಸಮಾವೇಶ ಗೊಳ್ಳಲಿದೆ. ತಹಸೀಲ್ದಾರ್‌ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಿದೆ. ಎಲ್ಲರೂ ಸ್ವಯಂಪ್ರೇತರಾಗಿ ಬಂದ್ ಗೆ ಬೆಂಬಲ ನೀಡುವಂತೆ ಕೋರಲಾಗಿದೆ.

ಸರ್ವಧರ್ಮ ಒಗ್ಗೂಡಿಸಿದ ಕಾಂಗ್ರೆಸ್‌ಗೆ ಗೆಲುವು

ಕೆಪಿಸಿಸಿ ವಕ್ತಾರ ಎಚ್.ಎಚ್.ದೇವರಾಜ್ | ದಾವಣಗೆರೆ, ಬಾಗಲಕೋಟೆ ಉಪಚುನಾವಣೆಯಲ್ಲಿ ಜಯಕ್ಕೆ ಸಂಭ್ರಮ


ಪಂಚರಾಜ್ಯ ಚುನಾವಣೆ ಗೆಲುವಿಗೆ ಹನುಮಂತಪ್ಪ ವೃತ್ತದಲ್ಲಿ ಕಾಂಗ್ರೆಸ್ ಸಂಭ್ರಮಾಚರಣೆ ಮಾಡಲಾಯಿತು.

• **ಕನ್ನಡಪ್ರಭ ವಾರ್ತೆ** ಚಿಕ್ಕಮಗಳೂರು

ರಾಜ್ಯದಲ್ಲಿ ಬಿಜೆಪಿ ಒಡೆದ ಮನೆಯಂತಾಗಿದೆ ಕಾಂಗ್ರೆಸ್ ಸರ್ವಧರ್ಮಗಳು ಹಾಗೂ ಜಾತಿಗಳನ್ನು ಒಂದು ಗೂಡಿಸುವ ಕೆಲಸ ಮಾಡುತ್ತಿದೆ. ಇದೇ ಕಾರಣ ದಿಂದಲೇ ರಾಜ್ಯದಲ್ಲಿ ನಡೆದ ಉಪಚುನಾವಣೆಯಲ್ಲಿ 2 ಕ್ಷೇತ್ರದಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಎಚ್.ಎಚ್.ದೇವರಾಜ್ ಅಭಿಪ್ರಾಯಪಟ್ಟರು.

ನಗರದ ಹನುಮಂತಪ್ಪ ವೃತ್ತದಲ್ಲಿ ರಾಜ್ಯದಲ್ಲಿ ನಡೆದ ಉಪಚುನಾವಣೆ ಎರಡು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಸೋಮವಾರ ಸಂಭ್ರಮಾಚರಣೆಯಲ್ಲಿ ಮಾತನಾಡಿ ಬಿಜೆಪಿರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಮ್ಮ ತಂದೆ ಯಡಿಯೂರಪ್ಪ ಹೆಸರಿನಲ್ಲೇ ರಾಜಕಾರಣ ಮಾಡುತ್ತಿದ್ದಾರೆ. ಇನ್ನು ಬಸವನಗೌಡ ಪಾಟೀಲ್ ಸೇರಿದಂತೆ ಹಲವರು ಒಗ್ಗಟ್ಟಿನ ಕೊರತೆಯಿಂದ ಪಕ್ಷ ತ್ಯಜಿಸಿದ್ದಾರೆ. ಹೀಗಾಗಿ ರಾಜ್ಯದಲ್ಲಿ ಬಿಜೆಪಿ ಒಡೆದ ಮನೆಯಾಗಿದೆ ಎಂದು ಲೇವಡಿ ಮಾಡಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಗ್ಯಾರಂಟಿ ಯೋಜನೆ ಘೋಷಿಸಿದಾಗ ಬಿಜೆಪಿ ಕಟುವಾಗಿ ಟೀಕಿಸಿತ್ತು. ಆದರೆ ಇದೇ ಬಿಜೆಪಿ ಪಂಚರಾಜ್ಯಗಳ ಚುನಾವಣೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡಿ ಚುನಾವಣೆ ನಡೆಸಿದೆ. ಈ ಮೂಲಕ ಮೂರು ರಾಜ್ಯಗಳಲ್ಲಿ ವಾಮ ಮಾರ್ಗದ ಮೂಲಕ ಗೆಲುವು ಸಾಧಿಸಿದೆ ಎಂದು ಕಿಡಿಕಾರಿದರು.

> **ರಾಜ್ಯದ ಎರಡು ಕ್ಷೇತ್ರದ ಉಪ ಚುನಾವಣೆ ಫಲಿತಾಂಶವು ಮುಂಬರಲಿರುವ 2028ನೇ ಸಾಲಿನ ವಿಧಾನಸಭಾ ಚುನಾವಣೆ ಫಲಿತಾಂಶದ ದಿಕ್ಸೂಚಿಯಾಗಿದೆ. ಉಪ ಚುನಾವಣೆಯಲ್ಲಿ ಬಿಜೆಪಿ ಏನೇ ಕುತಂತ್ರ ನಡೆಸಿದರೂ ಗೆಲ್ಲಲು ಸಾಧ್ಯವಾಗಿಲ್ಲ. ಬಿಜೆಪಿಗೆ ಯಾವುದೇ ನೈತಿಕ ಸಿದ್ಧಾಂತವಿಲ್ಲ. ಜನಪರ ಆಲೋಚನೆಯಂತೆ ಮೊದಲೇ ಇಲ್ಲ. ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ನಾಯಕರ ಬಗ್ಗೆ ಟೀಕೆ ಮಾಡುವುದೇ ಬಿಜೆಪಿ ಕೆಲಸ. ಇದಕ್ಕೆ ಕರ್ನಾಟಕದ ಜನ ತಕ್ಕ ಪಾಠ ಕಲಿಸಿದ್ದಾರೆ.**
>
> • **ಎಚ್.ಪಿ.ಮಂಜೇಗೌಡ** ಅಧ್ಯಕ್ಷ, ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರ

ವಿಜಯೋತ್ಸವದ ವೇಳೆ ಕಾಂಗ್ರೆಸ್ ಕಾರ್ಯಕರ್ತರುಪಟಾಕಿಸಿಡಿಸಿ, ಸಿಹಿಹಂಚಿಸಂಭ್ರಮಾಚರಣೆ ನಡೆಸಿದರು. ಈ ವೇಳೆ ಮುಖಂಡರಾದ ಬೆಟ್ಟಗೆರೆ ಪ್ರವೀಣ್, ಸಿ.ಎನ್.ಅಕ್ಮಲ್, ಲಕ್ಷ್ಮಣ್, ಪರಮೇಶ್ವರ್ ರಾಜ್ ಅರಸ್, ಎಚ್.ಎಸ್.ಶಿವಕುಮಾರ್, ಪ್ರಸಾದ್ ಅಮೀನ್, ಎನ್.ಎಂ.ನಾಗೇಶ್, ರಾಜೇಶ್ ಥಾಯಿರ್ ಮತ್ತಿತರರಿದ್ದರು.

ಪಂಚ ರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿ ಗೆಲುವಿಗೆ ವಿಜಯೋತ್ಸವ

• **ಕನ್ನಡಪ್ರಭ ವಾರ್ತೆ** ಚಿಕ್ಕಮಗಳೂರು

ಪಂಚರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿ ಮೂರು ರಾಜ್ಯಗಳಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದ ಹಿನ್ನೆಲೆಯಲ್ಲಿ ಚಿಕ್ಕಮಗಳೂರಿನ ಬಿಜೆಪಿ ಕಾರ್ಯಕರ್ತರು ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಸೋಮವಾರ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಕೇಂದ್ರ ಸರ್ಕಾರದ ಹತ್ತು ಹಲವು ಯೋಜನೆಗಳಿಂದ ಜನ ಬಿಜೆಪಿ ಬೆಂಬಲಿಸಿದ್ದಾರೆ. ಅದರಲ್ಲೂ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅದ್ಭುತಪೂರ್ವ ಗೆಲುವುಸಾಧಿಸಿರುವುದುಮುಂದಿನಚುನಾವಣೆಗಳ ದಿಕ್ಸೂಚಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಆರಂಭದ ದಿನಗಳಿಂದಲೂ ಜನಪರ ಹಾಗೂ ಜನಸಾಮಾನ್ಯರ ಪರವಾಗಿ ಕೆಲಸ ಮಾಡುತ್ತಿದೆ. ಇದರಿಂದ ದೇಶದ ವಿವಿಧ ರಾಜ್ಯಗಳಲ್ಲಿ ಬಿಜೆಪಿ ಅಧಿಕಾರಕ್ಕೇರುತ್ತಿದೆ. ಇದು ಬಿಜೆಪಿ ಕಾರ್ಯಕರ್ತರ ಆತ್ಮ ಸ್ಥೈರ್ಯ ಹಾಗೂ ಹುಮ್ಮಸ್ಸನ್ನು ಇಮ್ಮಡಿಗೊಳಿಸಿದೆ. ಕರ್ನಾಟಕದಲ್ಲಿಯೂ ಇದೇ ಫಲಿತಾಂಶ ಬರಲಿದೆ ಎಂದು ಘೋಷಣೆ ಕೂಗಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎಂ. ಆರ್.ದೇವರಾಜ ಶೆಟ್ಟಿ, ನಗರಾಧ್ಯಕ್ಷ ಕೆ.ಎಸ್.ಪುಷ್ಪರಾಜ್, ಮುಖಂಡರಾದ ಪ್ರೇಮ್ ಕುಮಾರ್, ಕೋಟೆ ರಂಗನಾಥ್, ಈಶ್ವರಹಳ್ಳಿ ಮಹೇಶ್, ನಾರಾಯಣ ಗೌಡ, ಸಂತೋಷ್ ಕೋಟ್ಯಾನ್ ಮತ್ತಿತರರಿದ್ದರು.


ಚಿಕ್ಕಮಗಳೂರಿನ ಆಜಾದ್ ಪಾರ್ಕ್ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಕಡೂರಲ್ಲಿ ಕಾಂಗ್ರೆಸ್ ವಿಜಯದ ಆಚರಣೆ

ಕಡೂರು: ದಾವಣಗೆರೆ ಹಾಗೂ ಬಾಗಲಕೋಟೆ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆ ಮತ್ತು ಕೇರಳ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಜಯಭೇರಿ ಭಾರಿಸಿರುವುದರಿಂದ ಕಡೂರು- ಬೀರೂರು ಬ್ಲಾಕ್ ಕಾಂಗ್ರೆಸ್ ನಿಂದ ಪಟ್ಟಣದ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ವಿಜಯೋತ್ಸವ ಆಚರಿಸಲಾಯಿತು.

ಪಕ್ಷದ ಮುಖಂಡರು ಹಾಗು ಕಾರ್ಯಕರ್ತರು ಕಡೂರು ಮತ್ತು ಬೀರೂರು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಆಸಂದಿ ಕಲ್ಲೇಶ್, ಚಂದ್ರಮೌಳಿ ನೇತೃತ್ವದಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಾಚರಣೆ ಮಾಡಿದರು.


ಕಡೂರು- ಬೀರೂರು ಬ್ಲಾಕ್ ಕಾಂಗ್ರೆಸ್‌ನಿಂದ ಕಡೂರು ಪಟ್ಟಣದ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ವಿಜಯೋತ್ಸವ ಆಚರಿಸಲಾಯಿತು.

ಕೆರೆಯಲ್ಲಿ ಮುಳುಗಿ ನಾಲ್ಕು ಮಕ್ಕಳ ದುರ್ಮರಣ

ಅರಳುಗುಪ್ಪೆ ಗ್ರಾಮದ ಕಾರಂಜಿ ಕೆರೆಯಲ್ಲಿ ದುರ್ಘಟನೆ | ಒಂದು ಮಗು ಪ್ರಾಣಾಪಾಯದಿಂದ ಪಾರು

• **ಕನ್ನಡಪ್ರಭ ವಾರ್ತೆ** ಚಿಕ್ಕಮಗಳೂರು

ಆಟವಾಡುತ್ತಾ ಬಾತುಕೋಳಿ ಹಿಡಿಯುವುದಕ್ಕೆ ಹೋದ ಒಂದು ಮಗುವನ್ನು ರಕ್ಷಿಸಲು ಹೋದ ನಾಲ್ವರು ಮಕ್ಕಳು ಕೆರೆಯಲ್ಲಿ ಮುಳುಗಿ ಮೃತಪಟ್ಟ ಧಾರುಣ ಘಟನೆ ಚಿಕ್ಕಮಗಳೂರು ತಾಲೂಕಿನ ಅರಳುಗುಪ್ಪೆ ಗ್ರಾಮದ ಕಾರಂಜಿ ಕೆರೆಯಲ್ಲಿ ಸೋಮವಾರ ನಡೆದಿದೆ.

ಅರಳುಗುಪ್ಪೆ ಗ್ರಾಮದ ಅಬ್ದುಲ್ ರೆಹಮಾನ್ (13), ನಾಯಜ್ (12), ಶಿವಮೊಗ್ಗದ ಮೈದಿಹಾ (9), ಅರಮಾನ್ (8) ಮೃತಪಟ್ಟ ಮಕ್ಕಳು. ಅರಳುಗುಪ್ಪೆಯ 4 ವರ್ಷದ ಅರ್ಮನ್ ಪ್ರಾಣಾಪಾಯದಿಂದ ಪಾರಾಗಿದ್ದು, ಚಿಕಿತ್ಸೆಗಾಗಿ ಚಿಕ್ಕಮಗಳೂರಿನ ಮಲ್ಲೇಗೌಡ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಕಾರಂಜಿ ಕೆರೆ ಮಧ್ಯ ಭಾಗದಲ್ಲಿ ಮಾತ್ರ ನೀರಿದ್ದು, ಕೆರೆ ಪಾತ್ರದಲ್ಲಿ ಈ ಮಕ್ಕಳು ಆಟವಾಡುವಾಗ ಈ ದುರ್ಘಟನೆ ನಡೆದಿದೆ. ಆಟವಾಡುತ್ತಿರುವಾಗ ತಮ್ಮೊಂದಿಗಿದ್ದ ಬಾತುಕೋಳಿ ನೀರಿಗಿಳಿದಿದೆ ಎಂದು ಅರ್ಮನ್ (4)ಪುಟ್ಟ ಬಾಲಕಿ ಅದನ್ನು ಹಿಡಿಯಲು ಹೋದಿ ನೀರಿಗೆ ಬಿದ್ದಿದ್ದಾಳೆ. ಈ ಬಾಲಕಿಯನ್ನು ರಕ್ಷಿಸಲು ಒಬ್ಬರ ಹಿಂದೊಬ್ಬರಂತೆ ಮಕ್ಕಳು ನೀರಿಗಿಳಿದ ನಾಲ್ವರು ಮಕ್ಕಳು ಮೃತಪಟ್ಟಿದ್ದಾರೆ. ಮೊದಲು ನೀರಿಗೆ ಬಿದ್ದ ಬಾಲಕಿಯನ್ನು ರಕ್ಷಿಸಿದ್ದರಿಂದ ಆಕೆ ಪ್ರಾಣಾಪಾಯದಿಂದ ಪಾರಾಗಿದ್ದಾಳೆ ಎಂದು ಹೇಳಲಾಗುತ್ತಿದೆ. ಈ ಸಂಬಂಧ ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ತನಿಖೆ ಆರಂಭಿಸಿದ್ದಾರೆ. ಜಿಲ್ಲಾಸ್ಪತ್ರೆಯ ಶವಾಗಾರದ ಎದುರು ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

ಶಾಸಕ ತಮ್ಮಯ್ಯ ಸಾಂತ್ವನ: ಶಾಸಕ ಎಚ್.ಡಿ.ತಮ್ಮಯ್ಯ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯುತ್ತಿರುವ ಮಗುವಿನ ಆರೋಗ್ಯ ವಿಚಾರಿಸಿದರಲ್ಲದೆ ಮೃತ ಮಕ್ಕಳ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಈ ವೇಳೆ ಮಾತನಾಡಿದ ಶಾಸಕ ಎಚ್.ಡಿ.ತಮ್ಮಯ್ಯ ಇಂತಹ ಘಟನೆಗಳು ನಡೆಯಬಾರದು. ಮೃತ ಮಕ್ಕಳ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಲು ಕ್ರಮ ಕೈಗೊಳ್ಳುತ್ತೇವೆ. ಎಷ್ಟೇ ಪರಿಹಾರ ನೀಡಬಹುದು. ಆದರೆ ಮಕ್ಕಳನ್ನು ಮರಳಿ ಕೊಡಲು ಸಾಧ್ಯವಿಲ್ಲ. ಮುಂದೆ ಈ ರೀತಿ ಘಟನೆಗಳು ನಡೆಯದಂತೆ ಎಚ್ಚರ ವಹಿಸಲು ಜಿಲ್ಲಾಧಿಕಾರಿಯೊಂದಿಗೆ ಮಾತನಾಡಿದ್ದೇನೆ ಎಂದರು.

ಕೆರೆಗಳ ಬಳಿ ಯಾವ ರೀತಿ ಮುಂಜಾಗ್ರತ ಕ್ರಮ ಕೈಗೊಳ್ಳಬಹುದು ಎಂಬ ಬಗ್ಗೆ ಜಿಲ್ಲಾಧಿಕಾರಿ ಜೊತೆ ಚರ್ಚೆ ನಡೆಸಿದ್ದೇನೆ. ಕ್ಷೇತ್ರದಲ್ಲಿ ಈ ರೀತಿ ಹಲವು ಕೆರೆಗಳಿವೆ. ಮಕ್ಕಳ ಸುರಕ್ಷತೆಗೆ ಇಲ್ಲಿ ಯಾವ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಚಿಂತನೆ ನಡೆಸುತ್ತೇವೆ ಎಂದರು.

ನಾಲ್ಕು ವರ್ಷದ ಓರ್ವ ಮಗುವಿನ ಸ್ಥಿತಿ ಚಿಂತಾಜನಕವಾಗಿದ್ದು, ಮಗುವಿಗೆ ಯಾವುದೇ ಅಪಾಯವಾಗದಂತೆ ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಸೂಚನೆ ನೀಡಿದ್ದೇನೆ ಎಂದು ಹೇಳಿದರು.

ಮಕ್ಕಳಾಗಲಿಲ್ಲವೆಂದು ಆತ್ಮಹತ್ಯೆ

ಬೀರೂರು: ಮಕ್ಕಳಾಗಲಿಲ್ಲವೆಂದು ಮನನೊಂದ ವ್ಯಕ್ತಿಯೋರ್ವ ಹಲಸಿನ ಮರಕ್ಕೆ ನೇಣು ಬಿಗಿದು ಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಪುನೀತ್ (43) ಮೃತ ದುರ್ದೈವಿ. ಪಟ್ಟಣದ ರಾಜಾಜಿ ನಗರ ನಿವಾಸಿಯಾಗಿದ್ದ ಪುನೀತ್ ಮೆಸ್ಕಾಂ ನಲ್ಲಿ ಕೆಲಸಮಾಡುತ್ತಿದ್ದ ತನ್ನ ತಂದೆ ನಾಗರಾಜ್ ಕರ್ತವ್ಯದ ವೇಳೆ ಮೃತಪಟ್ಟ ಹಿನ್ನಲೆಯಲ್ಲಿ ಅನುಕಂಪದ ಆಧಾರದ ಮೇಲೆ ಮೆಸ್ಕಾಂ ಕಚೇರಿಯಲ್ಲಿ ವಾಚ್‌ಮನ್ ನೌಕರಿ ಪಡೆದಿದ್ದ. 11 ವರ್ಷಗಳ ಹಿಂದೆ ಮದುವೆಯಾಗಿದ್ದ ಆದರೆ ಮಕ್ಕಳಿರಲಿಲ್ಲ. ಈ ಬಗ್ಗೆ ಹಲವಾರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿದ್ದರೂ ಸಹ ಮಕ್ಕಳಾಗಿರಲಿಲ್ಲ. ಇದೇ ವಿಷಯವಾಗಿ ಮನನೊಂದು ಸೋಮವಾರ ಬೆಳಗ್ಗೆ 8 ಗಂಟೆಗೆ ಕೆಲಸಕ್ಕೆ ತೆರಳಿ ಮೆಸ್ಕಾಂ ಉಗ್ರಾಣದ ಬಳಿ ಇದ್ದ ಮರಕ್ಕೆ ನೇಣುಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಬೆಳಗ್ಗೆ 10ಗಂಟೆಗೆ ಮೆಸ್ಕಾಂ ಕಚೇರಿಗೆ ಆಗಮಿಸಿದ ಸಿಬ್ಬಂದಿ ಇದನ್ನು ನೋಡಿ ಮೇಲಾಧಿಕಾರಿಗಳಿಗೆ ತಿಳಿಸಿದ್ದಾರೆ. ಸ್ಥಳಕ್ಕಾಗಮಿದ ಪೊಲೀಸರು ಪರಿಶೀಲನೆ ನಡೆಸಿ ದಾಗ ಡೆತ್‌ನೋಟ್ ಸಿಕ್ಕಿದೆ. ನನ್ನ ಸಾವಿಗೆ ಯಾರು ಕಾರಣರಲ್ಲ, ಮನನೊಂದು ಆತ್ಮಹತ್ಯೆ ಮಾಡಿ ಕೊಳ್ಳುತ್ತೇನೆಂದು ಬರೆದಿದ್ದಾನೆ. ತಾಯಿ ಮೀನಾಕ್ಷಮ್ಮ ನೀಡಿದ ದೂರಿನನ್ವಯ ಬೀರೂರು ಠಾಣೆಯಲ್ಲಿ ದೂರು ದಾಖಲಾಗಿದೆ.



ಮದುವೆ ಆಗುವುದಾಗಿ ನಂಬಿಸಿ ವಂಚನೆ

ಬಾಳೆಹೊನ್ನೂರು: ಮದುವೆಯಾಗುವುದಾಗಿ ನಂಬಿಸಿ ಯುವತಿಯೊದಿಗೆ ದೈಹಿಕ ಸಂಪರ್ಕ ಬೆಳೆಸಿ ವಂಚಿಸಿರುವ ಘಟನೆ ಬಾಳೆಹೊನ್ನೂರು ಠಾಣಾ ವ್ಯಾಪ್ತಿಯ ಹೊಸನಗರ ತಾಲೂಕಿನಲ್ಲಿ ನಡೆದಿದೆ. ಹೊಸನಗರ ತಾಲೂಕಿನ ಕಣಕಿ ಬೇಳೂರು ವಾಸಿ ಬಿ.ಎಸ್.ಸಚಿನ್‌ಕುಮಾರ್ ಆರೋಪಿ. ಈತ ಪಟ್ಟಣ ಸಮೀಪದ ಯುವತಿಗೆ 2014ರಲ್ಲಿ ಸಾಲಿನಲ್ಲಿ ಪರಿಚಯವಾಗಿದ್ದು, ನಂತರ ಇಬ್ಬರಿಗೂ ಪ್ರೇಮಾಂಕುರವಾಗಿದೆ. ಸಚಿನ್ ಯುವತಿಯನ್ನು ಮದುವೆಯಾಗುವುದಾಗಿ ನಂಬಿಸಿ, ಆಕೆಯನ್ನು ಹಲವಾರು ಬಾರಿ ಹೊರ ಊರುಗಳಿಗೂ ಕರೆದೊಯ್ದಿದ್ದಾನೆ. ಅದಲ್ಲದೇ ಯುವತಿಯ ಮನೆಗೂ ಬಂದು ಆಕೆಯೊಂದಿಗೆ ಹಲವಾರು ಬಾರಿ ದೈಹಿಕ ಸಂಪರ್ಕ ಬೆಳೆಸಿದ್ದಾನೆ. ಈ ಬಗ್ಗೆ ಯುವಕ, ಯುವತಿ ಮನೆಯವರಿಗೂ ತಿಳಿದಿದೆ. ಹಲವು ವರ್ಷಗಳ ಪರಿಚಯಸ್ಥರಗಿದ್ದು ಮದುವೆ ಮಾಡಿಕೊಳ್ಳುವುದಾಗಿಯೂ ಹೇಳಿದ್ದ ಸಚಿನ್‌ಕುಮಾರ್ ವರಸೆ ಬದಲಿಸಿದ್ದ. ಆದರೆ ಇದೀಗ ಆರೋಪಿ ಸಚಿನ್ ಯುವತಿಗೆ ತಿಳಿಸದೆ ಗೌಪ್ಯವಾಗಿ ಹೊಸನಗರ ತಾಲೂಕಿನ ಮುತ್ತಿಗ ಗ್ರಾಮದ ಯುವತಿಜತೆಗೆ ಮದುವೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾನೆ. ಇದನ್ನು ತಿಳಿದ ಯುವತಿ ನನಗೆ ಅನ್ಯಾಯವಾಗಿದೆ. ಮದುವೆಯಾಗುವುದಾಗಿ ನಂಬಿಸಿ ವಂಚನೆ ಮಾಡಿದ ಯುವಕನ ವಿರುದ್ಧ ಕ್ರಮಕ್ಕೆಗೊಳ್ಳುವಂತೆ ಕೋರಿ ಯುವತಿ ಬಾಳೆಹೊನ್ನೂರು ಠಾಣೆಯಲ್ಲಿ ದೂರು ನೀಡಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ವಹಿಸಿದ್ದಾರೆ.

2023ರಲ್ಲೇ ಜೀವರಾಜ್‌ಗೆ ಗೆಲುವು, ಈಗ ಸಂಭ್ರಮಾಚರಣೆ: ಅರುಣಕುಮಾರ್


ನರಸಿಂಹರಾಜಪುರ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಬಿಜೆಪಿಯಿಂದ ಸಂಭ್ರಮಾಚರಣೆ ನಡೆಯಿತು. ಬಿಜೆಪಿ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಅರುಣಕುಮಾರ್, ತಾಲೂಕು ಬಿಜೆಪಿ ಅಧ್ಯಕ್ಷ ವಿ.ನೀಲೇಶ್ ಮತ್ತಿತರರು ಇದ್ದರು.

• **ಕನ್ನಡಪ್ರಭ ವಾರ್ತೆ** ನರಸಿಂಹರಾಜಪುರ

2023 ರ ವಿಧಾನ ಸಭಾ ಚುನಾವಣೆಯಲ್ಲೇ ಜೀವರಾಜ್ ಗೆದ್ದಿದ್ದಾರೆ. ಈಗ ಸಂಭ್ರಮಾಚರಣೆ ಮಾಡುತ್ತಿದ್ದೇವೆ ಎಂದು ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಅರುಣಕುಮಾರ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್‌ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ ವಿಜಯೋತ್ಸವದಲ್ಲಿ ಮಾತನಾಡಿ ಶೃಂಗೇರಿ ಕ್ಷೇತ್ರದಲ್ಲಿ ಸತ್ಯಕ್ಕೆ ಜಯಸಿಕ್ಕಿದೆ. ಕಳೆದ 8 ವರ್ಷದಿಂದಲೂ ಜೀವರಾಜ್ ಅಧಿಕಾರದಲ್ಲಿಲ್ಲ. ಆದರೂ ಕಾಂಗ್ರೆಸ್ ಮುಖಂಡರು ಜೀವರಾಜ್ ಮತ ಎಣಿಕೆಯಲ್ಲಿ ಮೋಸ ಮಾಡಿದ್ದಾರೆ ಎಂದು ಆರೋಪ ಮಾಡುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರ ನಡೆಸುತ್ತಿದೆ. ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಟರು ನಿಮ್ಮ ಕೈಯಲ್ಲೇ ಇದ್ದರೂ ಜೀವರಾಜ್ ಮೇಲೆ ಆರೋಪ ಮಾಡುತ್ತಿದ್ದಾರೆ.

2023 ಚುನಾವಣೆಯಲ್ಲಿ ಟಿ.ಡಿ. ರಾಜೇಗೌಡ ಸೋತಿದ್ದಾರೆ. 3 ವರ್ಷ ಮೋಸ ಮಾಡಿ ಅಧಿಕಾರ ನಡೆಸಿ ಸರ್ಕಾರಿ ಸೌಲಭ್ಯ ಉಪಯೋಗಿಸಿಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಈ ಬಗ್ಗೆ ಬಿಜೆಪಿ ಹೋರಾಟ ಮಾಡುತ್ತದೆ. ರಾಜೇಗೌಡರು ಎಣಿಕೆ ಕಾರ್ಯ ಮುಗಿಯುವ ಮುನ್ನವೇ ವಿಜಯೋತ್ಸವ ಮಾಡಿದ್ದಾರೆ. ಆದರೆ, ಚುನಾವಣಾ ಆಯೋಗ ಅಧಿಕೃತ ಪ್ರಮಾಣ ಪತ್ರ ನೀಡಿದ ನಂತರ ಬಿಜೆಪಿ ವಿಜಯೋತ್ಸವ ಮಾಡುತ್ತಿದೆ. 2028ರಲ್ಲೂ ಡಿ.ಎನ್.ಜೀವರಾಜ್ ಶಾಸಕರು, ಮಂತ್ರಿಯೂ ಆಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕು ಬಿಜೆಪಿ ಪಕ್ಷದ ಅಧ್ಯಕ್ಷ ವಿ.ನೀಲೇಶ್ ಮಾತನಾಡಿ, 3 ವರ್ಷದ ಹಿಂದೆ ಸಿಗಬೇಕಾಗಿದ್ದ ಶಾಸಕ ಸ್ಥಾನ ಈಗ ಸಿಕ್ಕಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುತ್ತದೆ ಎಂದು 2023 ರಲ್ಲಿ ಜಿಲ್ಲಾಡಳಿತ ಹಾಗೂ ಚುನಾವಣಾ ಆಯೋಗ ಅಧಿಕಾರ ದುರುಪಯೋಗ ಮಾಡಿಕೊಂಡಿತ್ತು. ಮತಗಟ್ಟೆ ಅಧಿಕಾರಿಗಳಿಗೆ ಒತ್ತಡ ಹಾಕಿ ಬಿಜೆಪಿ ಅಭ್ಯರ್ಥಿ ಜೀವರಾಜ್ ಗೆದ್ದಿರುವುದನ್ನು ರಾಜೇಗೌಡ ಗೆಲ್ಲುವಂತೆ ಮಾಡಿದ್ದರು. ತಿರಸ್ಕೃತ 255 ಅಂಚೆ ಮತ ರಾಜೇಗೌಡರಿಗೆ ಹಾಕಿಸಿ 201 ಮತಗಳ ಅಂತರದಿಂದ ಗೆದ್ದಿದ್ದಾರೆ ಎಂದು ಬಿಂಬಿಸಿದ್ದರು. 2023 ರ ಚುನಾವಣೆ ಎಣಿಕೆ ದಿನವೇ ಮರು ಮತ ಎಣಿಕೆಗೆ ಜೀವರಾಜ್ ಆಗ್ರಹಿಸಿದ್ದರು. ಮನವಿಗೆ ಪುರಸ್ಕಾರ ಸಿಗದೇ ಕಾನೂನು ಹೋರಾಟ ಮಾಡಿ ಹೈಕೋರ್ಟಿನ ಆದೇಶದಿಂದ ಸತ್ಯ ಗೆದ್ದಿದೆ ಎಂದರು.

ಮುಖಂಡರಾದ ಬಿ.ಎಸ್.ಆಶೀಶ್ ಕುಮಾರ್, ಪರ್ವೀಜ್, ಕೆಸವಿ ಮಂಜುನಾಥ್, ರಶ್ಮಿ ದಯಾನಂದ್, ಪ್ರೀತಮ್, ಅಶ್ವನ್, ಎಚ್.ಡಿ.ಲೋಕೇಶ್, ಸುರಭಿ ರಾಜೇಂದ್ರ, ಎನ್.ಎಂ.ಕಾಂತರಾಜ್, ಜಯರಾಂ, ಈಚಿಕೆರೆ ಜಗದೀಶ್, ವೈ.ಎಸ್.ರವಿ, ಮಂಜುನಾಥ್ ಲಾಡ್, ಎಸ್.ಎಸ್.ಸಂತೋಷಕುಮಾರ್, ದಿವಾಕರ್, ಡಾ.ಮಹೇಶ್ ಭಂಡಾರಿ ಮತ್ತಿತರರು ಇದ್ದರು.

ವೃತ್ತ ನಿರೀಕ್ಷಕರ ದೌರ್ಜನ್ಯಕ್ಕೆ ಖಂಡನೆ | **ಕಳಪೆ ಕಾಮಗಾರಿ ವಿರೋಧಿಸಿ ನಡೆದ ಬೃಹತ್ ಪ್ರತಿಭಟನೆಯಲ್ಲಿ ಡಿ.ಎಸ್.ಸುರೇಶ್**

ಶಾಸಕರಿಂದ ಅಧಿಕಾರ ದುರ್ಬಳಕೆ: ಆರೋಪ

• **ಕನ್ನಡಪ್ರಭ ವಾರ್ತೆ** ತರೀಕೆರೆ

ಶಾಸಕ ಜಿ.ಎಚ್.ಶ್ರೀನಿವಾಸ್ ಅವರು ತಾಲೂಕು ಆಡಳಿತವನ್ನು ತಮ್ಮ ಬಿಗಿಮುಷ್ಠಿಯಲ್ಲಿರಿಸಿಕೊಂಡು ಅಧಿಕಾರವನ್ನು ದುರ್ಬಳಕೆ ಮಾಡುತ್ತಿದ್ದಾರೆ ಎಂದು ಮಾಜಿ ಶಾಸಕ ಡಿ.ಎಸ್.ಸುರೇಶ್ ಆರೋಪಿಸಿದ್ದಾರೆ.

ನಾಗರಿಕ ಹೋರಾಟ ಸಮಿತಿ ಮತ್ತು ಪ್ರಗತಿಪರ ಸಂಘಟನೆ, ದಲಿತ ಸಂಘರ್ಷ ಸಮಿತಿ, ರೈತ ಹೋರಾಟ ವೇದಿಕೆ, ತರೀಕೆರೆ ಕರ್ನಾಟಕ ರಕ್ಷಣಾ ವೇದಿಕೆ ಆಶ್ರಯದಲ್ಲಿ ಸೋಮವಾರ ಪೊಲೀಸ್ ವೃತ್ತ ನಿರೀಕ್ಷಿಕರವರ ದೌರ್ಜನ್ಯ ಖಂಡಿಸಿ ಹಾಗೂ ಕಳಪೆ ಕಾಮಗಾರಿ ವಿರೋಧಿಸಿ ಪಟ್ಟಣದ ಮಹಾತ್ಮಾ ಗಾಂಧಿ ವೃತ್ತದ ಬಳಿ ನಡೆದ ಬೃಹತ್ ಪ್ರತಿಭಟನಾ ಮೆರವಣಿಗೆಯಲ್ಲಿ ಮಾತನಾಡುತ್ತಿದ್ದರು.

ಕಳೆದ ಮೂರು ವರ್ಷಗಳಿಂದ ಯಾವುದೇ ಅಭಿವೃದ್ಧಿ ಕಾರ್ಯಗಳೂ ಆಗಿಲ್ಲ. ರಸ್ತೆ ಕಾಮಗಾರಿ, ಬಸ್ ಸ್ಟ್ಯಾಂಡ್ ಕಳಪೆ ಕಾಮಗಾರಿ ಆಗಿದೆ. ಪಟ್ಟಣದಲ್ಲಿನಿರ್ಮಾಣವಾಗುತ್ತಿರುವ ಮೌಲಾನ ಆಜಾದ್ ಸರ್ಕಾರಿ ಶಾಲಾ ಕಟ್ಟಡಕ್ಕೆ ಬಳಸಿರುವ ಸಾಮಗ್ರಿ ಕಳಪೆಯಾಗಿದೆ. ಜನಪ್ರತಿನಿಧಿ ಮತ್ತು ನಾಗರಿಕರಿಗೆ ಈ ಕಳಪೆ ಕಾಮಗಾರಿ ಪ್ರಶ್ನಿಸುವ ಹಕ್ಕು ಇದೆ. ಪೊಲೀಸರು ಮಧ್ಯಪ್ರವೇಶಿಸಿ ದೌರ್ಜನ್ಯ ನಡೆಸುವ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.



ತರೀಕೆರೆಯಲ್ಲಿ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಮಾಜಿ ಶಾಸಕ ಡಿ.ಎಸ್. ಸುರೇಶ್ ಮಾತನಾಡಿದರು. ಡಿಸಿಸಿ ಬ್ಯಾಂಕ್ ನಿರ್ದೇಶಕ ಟಿ.ಎಲ್.ರಮೇಶ್, ಪುರಸಭೆ ಸದಸ್ಯ ಟಿ.ಎಂ. ಬೋಜರಾಜ್ ಮತ್ತಿತರರು ಭಾಗವಹಿಸಿದ್ದರು.

ತಾಲೂಕಿನಲ್ಲಿ ಮದ್ಯದಂಗಡಿಗಳು ಹೆಚ್ಚಾಗುತ್ತಿದ್ದು ಅದರಲ್ಲಿ ಪಾಲುದಾರಿಕೆ ಇದೆ. ಅಂದರ್‌ಬಾಹರ್‌ಆಟ ಹೆಚ್ಚಾಗುತ್ತಿದೆ, ಬಿ.ಎಚ್.ರಸ್ತೆ ಕಾಮಗಾರಿ ಸಂದರ್ಬದಲ್ಲಿ ಬಿ.ಎಚ್. ರಸ್ತೆಯಲ್ಲಿ ವಿದ್ಯುತ್ ಕಂಬಗಳ ಕಾಪರ್‌ವೈರುಗಳು ಏನಾಯಿತು. ಈ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಟಿ.ಎಲ್. ರಮೇಶ್ ಮಾತನಾಡಿ ಪಟ್ಟಣದಲ್ಲಿ ಎರಡು ವರ್ಷಗಳಿಂದ ಬಿ.ಎಚ್.ರಸ್ತೆ ಕಾಮಗಾರಿ ತುಂಬಾ ನಿಧಾನವಾಗಿಲ್ಲಿ ಸಾಗುತ್ತಿದೆ. ಕಳಪೆ ಕಾಮಗಾರಿಯಿಂದ ಕೂಡಿದೆ. ರಸ್ತೆ ಕಾಂಕ್ರಿಟ್ ಈಗಾಗಲೇ ಅನೇಕ ಕಡೆ ಕಿತ್ತು ಹೋಗುತ್ತಿದೆ. ಶಾಸಕರು ಮಾತ್ರವಲ್ಲದೆ ಅವರ ಕುಟುಂಬ ಕೂಡ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದ ಅವರು ಬಿಜೆಪಿ ಸರ್ಕಾರ ಕೈಗೊಂಡಿದ್ದ ಅನೇಕ ಅಭಿವೃದ್ಧಿ ಕಾರ್ಯಗಳನ್ನು ತಮ್ಮದೆಂದು ಶಾಸಕರು ಹೇಳಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.

ಮೌಲಾನ ಆಜಾದ್ ಸರ್ಕಾರಿ ಶಾಲೆ ಕಟ್ಟಡ ನಿರ್ಮಾಣ ಕಳಪೆ ಕಾಮಗಾರಿ ಪ್ರಶ್ನಿಸಿದ ಜನಪ್ರತಿನಿಧಿಗಳ ಮೇಲೆ ಪೊಲೀಸ್ ವೃತ್ತ ನಿರೀಕ್ಷಿಕರವರು ಅವಹೇಳನಕಾರಿ ಯಾಗಿ ಮಾತಾಡಿದ್ದಾರೆ. ಅವರನ್ನು ಕೂಡಲೇ ಅಮಾನತ್ತು ಮಾಡಬೇಕು ಎಂದು ಒತ್ತಾಯಿಸಿದರು.

ಪುರಸಭೆ ಸದಸ್ಯ ಟಿ.ಎಂ.ಬೋಜರಾಜ್ ಮಾತನಾಡಿ ತರೀಕೆರೆ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ಕಾಮಗಾರಿಗಳು ಕಳಪೆಯಿಂದ ಕೂಡಿದೆ. ಲೋಕೋಪಯೋಗಿ ಇಲಾಖೆ ಉಸ್ತುವಾರಿಯಲ್ಲಿ ನಡೆಯುತ್ತಿರುವ ಅನೇಕ ಕಾಮಗಾರಿಗಳು ಕಳಪೆಯಾಗಿದೆ. ಗುತ್ತಿಗೆದಾರರು, ಅಧಿಕಾರಿಗಳು ಶಾಮೀಲಾಗಿದ್ದಾರೆ ಎಂದು ಆರೋಪಿಸಿದ ಅವರು ಶಾಲಾ ಕಟ್ಟಡಗಳು ಕಳಪೆಯಾಗಿದ್ದರೆ ವಿದ್ಯಾರ್ಥಿಗಳ ಜೀವನ ಹಾಳಾಗುತ್ತದೆ. ಮೌಲಾನ ಆಜಾದ್ ಸರ್ಕಾರಿ ಶಾಲೆ ಕಟ್ಟಡ ಕಾಮಗಾರಿ ಕಳಪೆಯಿಂದ ಕೂಡಿದ್ದನ್ನು ನಾನು ಪರಿಶೀಲನೆಗೆ ಹೋದಾಗ ಪೊಲೀಸರು ನಮ್ಮ ಮೇಲೆ ದಬ್ಬಾಳಿಕೆ ನಡೆಸಿದ್ದಾರೆ. ಈ ಪೊಲೀಸ್ ಅಧಿಕಾರಿಯನ್ನು ಕೂಡಲೇ ಅಮಾನತ್ತು ಮಾಡಬೇಕು ಎಂದು ಒತ್ತಾಯಿಸಿದರು.

ಅಜ್ಜಂಪುರ ಕೃಷ್ಣಮೂರ್ತಿ ಅಜ್ಜಂಪುರ ಪಪಂ ಅಧ್ಯಕ್ಷ ರೇವಣ್ಣ, ಪುರಸಭೆ ಮಾಜಿ ನಾಮಿನಿ ಸದಸ್ಯೆ ಅರುಂಧತಿ ಹೆಗಡೆ ಮತ್ತಿತರ ಮುಖಂಡರು ಮಾತನಾಡಿದರು. ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸ್ವಾತಂತ್ರ್ಯ ಪೂರ್ವ, ನಂತರದಲ್ಲಿ ಮಹತ್ವದ ಪಾತ್ರ ವಹಿಸಿದ ಪತ್ರಿಕೆ: ಡಿಸಿ ನಾಗರಾಜ್

ತಿಂಗಳ ಅತಿಥಿ ಕಾರ್ಯಕ್ರಮ ಉದ್ಘಾಟನೆ | ಕ್ರೀಡಾ ವಿಜೇತರಿಗೆ ಬಹುಮಾನ ವಿತರಣೆ

• **ಕನ್ನಡಪ್ರಭ ವಾರ್ತೆ** ಚಿಕ್ಕಮಗಳೂರು

ಸ್ವಾತಂತ್ರ್ಯ ಪೂರ್ವ, ಸ್ವಾತಂತ್ರ್ಯ ನಂತರ ಹಾಗೂ ಕರ್ನಾಟಕದ ಏಕೀಕರಣ ಸಂದರ್ಭದಲ್ಲಿ ಪತ್ರಿಕೆಗಳು ಮಹತ್ವದ ಪಾತ್ರ ವಹಿಸಿವೆ ಎಂದು ಜಿಲ್ಲಾಧಿಕಾರಿ ಎಂ.ಎನ್. ನಾಗರಾಜ್ ಹೇಳಿದರು.

